**ಮಾನ್ಯ ವಿಧಾನ ಪರಿಷತ್ ಸದಸ್ಯರಾದ ಶ್ರೀ ಅಲ್ಲಂ ವೀರಭದ್ರಪ್ಪ ಇವರು ನಿಯಮ-72ರಡಿ ಪ್ರಸ್ತಾಪಿಸಿರುವ ಸೂಚನೆಗೆ ಮಾನ್ಯ ವೈದ್ಯಕೀಯ ಶಿಕ್ಷಣ ಹಾಗೂ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖಾ ಸಚಿವರ ಹೇಳಿಕೆ.**

<u>ವಿಷಯ:</u>

ಕರ್ನಾಟಕ ರಾಜ್ಯ ಸೇರಿದಂತೆ ದೇಶದ ಹಲವು ರಾಜ್ಯಗಳ ವೈದ್ಯಕೀಯ ವಿದ್ಯಾರ್ಥಿಗಳು ನಮ್ಮ ದೇಶದ ದುಬಾರಿ ವೈದ್ಯಕೀಯ ಶಿಕ್ಷಣ ಶುಲ್ಕವನ್ನು ಪಾವತಿಸಲು ಸಾಧ್ಯವಾಗದ ಹಿನ್ನಲೆಯಲ್ಲಿ ಉಕ್ರೇನ್ ದೇಶದಲ್ಲಿ ಅತ್ಯಂತ ಕಡಿಮೆ ಶುಲ್ಕ ಪಾವತಿಯೊಂದಿಗೆ ವೈದ್ಯಕೀಯ ಶಿಕ್ಷಣವನ್ನು ಪಡೆಯಲು ಆ ದೇಶಕ್ಕೆ ವಲಸೆ ಹೋಗಿರುತ್ತಾರೆ. ಪ್ರಸ್ತುತ ಅಲ್ಲಿನ ಯದ್ಧಕಲಹದಿಂದಾಗಿ ತಮ್ಮ ತಮ್ಮ ರಾಜ್ಯಗಳಿಗೆ ಹಿಂತಿರುಗಿದ್ದು, ಅರ್ಧಕ್ಕೆ ನಿಂತಿರುವ ಶಿಕ್ಷಣವನ್ನು ಮುಂದುವರೆಸಲು ಅನುಕೂಲವಾಗುವಂತೆ ಕೇಂದ್ರ ಸರ್ಕಾರದ ಅನುಮತಿ ಪಡೆದು ಇಂಡಿಯನ್ ಮೆಡಿಕಲ್ ಕೌನ್ಸಿಲ್ ಅಸೋಷಿಯೇಷನ್‌ನೊಂದಿಗೆ ಚರ್ಚಿಸಿ ಎಲ್ಲಾ ರಾಜ್ಯದವರಿಗೂ ಅನುಕೂಲವಾಗುವಂತೆ ಮುಖ್ಯವಾಗಿ ಕರ್ನಾಟಕದಲ್ಲಿ ಮೊದಲನೇ ವರ್ಷದ ಪ್ರವೇಶಕ್ಕೆ ತಗುಲುವ ಶುಲ್ಕವನ್ನು ಸರ್ಕಾರವೇ ವಿಶೇಷ ಪ್ರಕರಣವೆಂದು ಪರಿಗಣಿಸಿ ಪಾವತಿಸಲು ಕ್ರಮ ಕೈಗೊಳ್ಳಬೇಕೆನ್ನುವ ಬಗ್ಗೆ ನಿಯಮ 72ರ ಅಡಿಯಲ್ಲಿ ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಹಾಗೂ ವೈದ್ಯಕೀಯ ಶಿಕ್ಷಣ ಸಚಿವರ ಗಮನ ಸೆಳೆಯಬಯಸುತ್ತೇನೆ. (ಸದನದಲ್ಲಿ ಪ್ರಸ್ತಾಪಿಸ ಬಯಸುತ್ತೇನೆ)

<u>ಉತ್ತರ:</u>

ನಮ್ಮ ರಾಷ್ಟ್ರದಲ್ಲಿ ರಾಷ್ಟ್ರೀಯ ವೈದ್ಯಕೀಯ ಪರಿಷತ್ತು ವೈದ್ಯಕೀಯ ಶಿಕ್ಷಣ ನೀತಿಯನ್ನು ನಿರೂಪಿಸುವ ಅಗ್ರಮಾನ್ಯ ಶಾಸನಬದ್ಧ ಸಂಸ್ಥೆಯಾಗಿರುತ್ತದೆ. ಪ್ರಸ್ತುತ ಹೊರದೇಶದಲ್ಲಿ ವೈದ್ಯಕೀಯ ಶಿಕ್ಷಣ ಪಡೆದ ವಿದ್ಯಾರ್ಥಿಗಳು ನಮ್ಮ ದೇಶದಲ್ಲಿ ವೈದ್ಯಕೀಯ ಸೇವೆಯನ್ನು ಇಚ್ಛೆಸಿದ್ದಲ್ಲಿ Foreign Medical Graduates Examination (FMGE) ಪರೀಕ್ಷೆಯಲ್ಲಿ ಉತ್ತೀರ್ಣರಾಗಿರಬೇಕಿರುತ್ತದೆ. ಸದ್ಯಕ್ಕೆ ಈ ಪರೀಕ್ಷೆಯಲ್ಲಿ ಯಾವುದೇ ವಿನಾಯಿತಿಯನ್ನು ನೀಡಲಾಗಿರುವುದಿಲ್ಲ. ಉಕ್ರೇನ್ ದೇಶದಲ್ಲಿ ವೈದ್ಯಕೀಯ ವಿದ್ಯಾಭ್ಯಾಸ ಮಾಡುತ್ತಿದ್ದ ವಿದ್ಯಾರ್ಥಿಗಳು ಯುದ್ಧದ ಕಾರಣದಿಂದ ರಾಜ್ಯಕ್ಕೆ ಮರಳಿದ್ದಾರೆ. ಸರ್ಕಾರದ ಅಧಿಕೃತ ಜ್ಞಾಪನ ಸಂಖ್ಯೆ:ಎಂಇಡಿ 127 ಎಂಪಿಎಸ್ 2022, ದಿನಾಂಕ:21-03-2022ರನ್ವಯ ಉಕ್ರೇನ್ ಯುದ್ಧದ ಪರಿಣಾಮವಾಗಿ ವ್ಯಾಸಂಗವನ್ನು ಮೊಟಕುಗೊಳಿಸಿ ಸ್ವದೇಶಕ್ಕೆ ವಾಪಸ್ಸಾದ ವೈದ್ಯಕೀಯ ವಿದ್ಯಾರ್ಥಿಗಳ ಸಮಸ್ಯೆಗಳ ಬಗ್ಗೆ ಪರಿಶೀಲಿಸಲು ಹಾಗೂ ಸಮಸ್ಯೆಗಳಿಗೆ ಸೂಕ್ತ ಪರಿಹಾರ ನೀಡುವ ನಿಟ್ಟಿನಲ್ಲಿ ಸಲಹೆಗಳನ್ನು ನೀಡಲು ಉಪಕುಲಪತಿಗಳು, ರಾಜೀವ್‌ಗಾಂಧಿ ಆರೋಗ್ಯ ವಿಜ್ಞಾನಗಳ ವಿಶ್ವವಿದ್ಯಾಲಯ ಇವರ ಅಧ್ಯಕ್ಷತೆಯಲ್ಲಿ ಸಮಿತಿಯನ್ನು ರಚಿಸಲಾಗಿದೆ. ಸಮಿತಿಯ ಕಾರ್ಯವ್ಯಾಪ್ತಿಯಲ್ಲಿ ವಿದ್ಯಾರ್ಥಿಗಳು ವ್ಯಾಸಂಗವನ್ನು ಸ್ಥಗಿತಗೊಳಿಸದಂತೆ ಹಾಗೂ ದೀರ್ಘಾವಧಿಯಲ್ಲಿ ಅವರ ಶೈಕ್ಷಣಿಕ ಹಿತಾಸಕ್ತಿಯನ್ನು ರಕ್ಷಿಸಲು ರಾಷ್ಟ್ರೀಯ ವೈದ್ಯಕೀಯ ಆಯೋಗ ತೆಗೆದುಕೊಳ್ಳಬೇಕಾದ ಕ್ರಮಗಳ ಬಗ್ಗೆ ಪರಿಶೀಲಿಸಬೇಕಾಗಿರುತ್ತದೆ.

ಇದೊಂದು ವಿಶೇಷ ಸಂದರ್ಭವಾಗಿದ್ದು, ಈ ಸಮಸ್ಯೆಯನ್ನು ಪರಿಹರಿಸುವ ನಿಟ್ಟಿನಲ್ಲಿ ಕೇಂದ್ರ ಮತ್ತು ರಾಜ್ಯ ಸರ್ಕಾರವು ಅವಶ್ಯಕ ಕ್ರಮ ಕೈಗೊಳ್ಳುವ ಬಗ್ಗೆ ವಿದ್ಯಾರ್ಥಿಗಳೊಂದಿಗೆ ಸಂವಾದ ನಡೆಸಿ ಹಾಗೂ ಕ್ಷೇತ್ರ ಪರಿಣಿತರೊಂದಿಗೆ ಚರ್ಚಿಸಿ ರಾಷ್ಟ್ರೀಯ ವೈದ್ಯಕೀಯ ಪರಿಷತ್ತು ನೀಡುವ ಸೂಚನೆಗಳೊಂದಿಗೆ ಪರಿಹಾರ ನೀಡುವಲ್ಲಿ ಸೂಕ್ತ ಕ್ರಮವನ್ನು ಕೈಗೊಳ್ಳಲಾಗುವುದು.

No: MED 31 RGU 2022

(ಡಾ:ಕೆ.ಸುಧಾಕರ್)

ವೈದ್ಯಕೀಯ ಶಿಕ್ಷಣ ಹಾಗೂ ಆರೋಗ್ಯ

ಮತ್ತು ಕುಟುಂಬ ಕಲ್ಯಾಣ ಇಲಾಖಾ ಸಚಿವರು